Akashvani: Bangalore
National Bulletin In Kannada
13.02.2026 : 7.35AM

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

13.02.2026 : 7.35AM

********

**ಮುಖ್ಯಾಂಶಗಳು:**

1. ನವದೆಹಲಿಯಲ್ಲಿಂದು ಸೇವಾತೀರ್ಥ ಕಟ್ಟಡ ಸಂಕೀರ್ಣದ ಹೆಸರು ಅನಾವರಣಗೊಳಿಸಲಿರುವ ಪ್ರಧಾನಿ ನರೇಂದ್ರ ಮೋದಿ
2. ಬಜೆಟ್ ಅಧಿವೇಶನ; ಸಂಸತ್ತಿನ ಉಭಯ ಸದನಗಳ ಕಲಾಪದ ಮೊದಲನೇ ಹಂತ ಇಂದು ಮುಕ್ತಾಯ
3. ಇಂದು ವಿಶ್ವ ರೇಡಿಯೋ ದಿನ; ರೇಡಿಯೋ ಮತ್ತು ಕೃತಕ ಬುದ್ಧಿಮತ್ತೆ; ಎಐ ಒಂದು ಸಾಧನ, ಧ್ವನಿಯಲ್ಲ ಈ ವರ್ಷದ ಧ್ಯೇಯವಾಕ್ಯ
4. ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್; ಎ ಗುಂಪಿನ ಪಂದ್ಯದಲ್ಲಿ ನಮೀಬಿಯಾ ವಿರುದ್ಧ ಭಾರತಕ್ಕೆ ೯೩ ರನ್‌ಗಳ ಜಯ

*******

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ನವದೆಹಲಿಯಲ್ಲಿ ಸೇವಾ ತೀರ್ಥ ಕಟ್ಟಡ ಸಂಕೀರ್ಣದ ಹೆಸರನ್ನು ಅನಾವರಣಗೊಳಿಸಲಿದ್ದಾರೆ. ನಂತರ ಪ್ರಧಾನಿ, ಸೇವಾ ತೀರ್ಥ ಹಾಗೂ ಕರ್ತವ್ಯ ಭವನ -೧ ಮತ್ತು ೨ಅನ್ನು ಔಪಚಾರಿಕವಾಗಿ ಉದ್ಘಾಟಿಸಲಿದ್ದಾರೆ. ಬಳಿಕ ಸಂಜೆ ಅವರು, ಸೇವಾ ತೀರ್ಥದಲ್ಲಿ ಸಾರ್ವಜನಿಕ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಈ ಉದ್ಘಾಟನೆಯು ಆಧುನಿಕ, ದಕ್ಷ, ಪ್ರವೇಶಿಸಬಹುದಾದ ಮತ್ತು ನಾಗರಿಕ ಕೇಂದ್ರಿತ ಆಡಳಿತ ಪರಿಸರ ವ್ಯವಸ್ಥೆಯನ್ನು ನಿರ್ಮಿಸುವ ಪ್ರಧಾನಿ ನರೇಂದ್ರ ಮೋದಿಯವರ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ.ಸೇವಾ ತೀರ್ಥವು ಪ್ರಧಾನ ಮಂತ್ರಿ ಕಚೇರಿ, ರಾಷ್ಟ್ರೀಯ ಭದ್ರತಾ ಮಂಡಳಿ ಸಚಿವಾಲಯ, ಕ್ಯಾಬಿನೆಟ್ ಸಚಿವಾಲಯವನ್ನು ಹೊಂದಿದೆ, ಇವೆಲ್ಲವೂ ಹಿಂದೆ ವಿವಿಧ ಸ್ಥಳಗಳಲ್ಲಿ

ನೆಲೆಗೊಂಡಿದ್ದವು. ಹೊಸ ಕಟ್ಟಡ ಸಂಕೀರ್ಣಗಳು ಆಡಳಿತಾತ್ಮಕ ಕಾರ್ಯಗಳನ್ನು, ಆಧುನಿಕ ಮತ್ತು ಭವಿಷ್ಯಕ್ಕೆ ಸಿದ್ಧವಾಗಿರುವ ಸೌಲಭ್ಯಗಳಲ್ಲಿ ಒಟ್ಟುಗೂಡಿಸುತ್ತವೆ. ಕರ್ತವ್ಯ ಭವನ -೧ ಮತ್ತು ೨ ಹಣಕಾಸು ಸಚಿವಾಲಯ, ರಕ್ಷಣಾ ಸಚಿವಾಲಯ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ, ಶಿಕ್ಷಣ ಸಚಿವಾಲಯ ಮತ್ತು ಮಾಹಿತಿ ಮತ್ತು ಪ್ರಸಾರ ಸಚಿವಾಲಯ ಸೇರಿದಂತೆ ಹಲವಾರು ಪ್ರಮುಖ ಸಚಿವಾಲಯಗಳನ್ನು ಒಳಗೊಂಡಿದೆ. ಎರಡೂ ಕಟ್ಟಡ ಸಂಕೀರ್ಣಗಳು ಡಿಜಿಟಲ್ ಸಂಯೋಜಿತ ಕಚೇರಿಗಳನ್ನು ಹೊಂದಿವೆ. ಈ ವೈಶಿಷ್ಟ್ಯಗಳು ಸಹಯೋಗ, ದಕ್ಷತೆ, ತಡೆರಹಿತ ಆಡಳಿತ, ಸುಧಾರಿತ ನಾಗರಿಕರ ತೊಡಗಿಸಿಕೊಳ್ಳುವಿಕೆ ಮತ್ತು ಉದ್ಯೋಗಿ ಯೋಗಕ್ಷೇಮವನ್ನು ಬೆಳೆಸುತ್ತವೆ. ಕಟ್ಟಡ ಸಂಕೀರ್ಣಗಳು ಸ್ಮಾರ್ಟ್ ಪ್ರವೇಶ ನಿಯಂತ್ರಣ ವ್ಯವಸ್ಥೆಗಳು, ಕಣ್ಗಾವಲು ಜಾಲಗಳು ಮತ್ತು ಸುಧಾರಿತ ತುರ್ತು ಪ್ರತಿಕ್ರಿಯೆ ಮೂಲಸೌಕರ್ಯದಂತಹ ಸಮಗ್ರ ಸುರಕ್ಷತೆ ಮತ್ತು ಭದ್ರತಾ ಚೌಕಟ್ಟುಗಳನ್ನು ಸಹ ಒಳಗೊಂಡಿವೆ.

*******

ಸಂಸತ್ತಿನ ಬಜೆಟ್ ಅಧಿವೇಶನದ ಮೊದಲನೇ ಹಂತದ ಕಲಾಪ ಇಂದಿಗೆ ಮುಕ್ತಾಯವಾಗಿ, ಉಭಯ ಸದನಗಳ ಕಲಾಪ ಮುಂದೂಡಲ್ಪಡಲಿದ್ದು, ಮುಂದಿನ ತಿಂಗಳ ೯ ರಂದು ಸದನ ಮತ್ತೆ ಸಭೆ ಸೇರಲಿದೆ. ಬಜೆಟ್ ಅಧಿವೇಶನವು ಎರಡು ಹಂತಗಳಲ್ಲಿ ನಡೆಯುತ್ತಿದ್ದು, ಮೊದಲ ಹಂತವು ಜನವರಿ ೨೮ ರಂದು ಪ್ರಾರಂಭವಾಯಿತು. ಎರಡನೇ ಹಂತವು ಏಪ್ರಿಲ್ ೨ ರವರೆಗೆ ನಡೆಯಲಿದೆ. ನಿನ್ನೆ, ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ರಾಜ್ಯಸಭೆಯಲ್ಲಿ ಕೇಂದ್ರ ಬಜೆಟ್ ಮೇಲಿನ ಚರ್ಚೆಗೆ ಉತ್ತರಿಸಿದರು. ಆರ್ಥಿಕ ಬೆಳವಣಿಗೆಯನ್ನು ಹೆಚ್ಚಿಸುವ ಮತ್ತು ಸಮಗ್ರ ಅಭಿವೃದ್ಧಿಯನ್ನು ಖಚಿತಪಡಿಸಿಕೊಳ್ಳುವ ಮೂಲಕ ಸರ್ಕಾರವು ಸ್ಥಿತಿಸ್ಥಾಪಕ ಮತ್ತು ಸ್ವಾವಲಂಬಿ ಭಾರತವನ್ನು ನಿರ್ಮಿಸುವತ್ತ ಗಮನಹರಿಸಿದೆ. ಹಣದುಬ್ಬರವನ್ನು ಕಡಿಮೆ ಇರಿಸಿಕೊಂಡು ಹೆಚ್ಚಿನ ಬೆಳವಣಿಗೆಯನ್ನು ಕಾಯ್ದುಕೊಳ್ಳಲಾಗಿದೆ ಎಂದು ಸಚಿವರು ಹೇಳಿದರು. ರಾಷ್ಟ್ರೀಯ ಅಂಕಿಅಂಶ ಕಚೇರಿಯ ಅಂದಾಜುಗಳನ್ನು ಉಲ್ಲೇಖಿಸಿದ ಹಣಕಾಸು ಸಚಿವರು, ೨೦೨೫-೨೬ರಲ್ಲಿ ಭಾರತದ ಜಿಡಿಪಿ ಶೇಕಡಾ ೭.೪ ರಷ್ಟು ಬೆಳೆಯುವ ನಿರೀಕ್ಷೆಯಿದೆ. ಬಲವಾದ ಆರ್ಥಿಕ ಅಂಶಗಳನ್ನು ಪ್ರತಿಬಿಂಬಿಸುವ ಚಿಲ್ಲರೆ ಹಣದುಬ್ಬರವು ಶೇಕಡಾ ೨ ಕ್ಕೆ ಇಳಿದಿದೆ ಎಂದು ಅವರು ತಿಳಿಸಿದರು.೨೦೧೭-೧೮ರಲ್ಲಿ ಶೇ. ೫.೬ ರಿಂದ ೨೦೨೩-೨೪ರಲ್ಲಿ ಶೇ. ೩.೨ ಕ್ಕೆ ನಿರುದ್ಯೋಗ

ಕಡಿಮೆಯಾಗಿದೆ ಎಂದ ಸಚಿವರು, ಇದು ಆರ್ಥಿಕತೆಯು ಉದ್ಯೋಗಗಳನ್ನು ಸೃಷ್ಟಿಸುತ್ತಿದೆ ಎಂಬುದರ ಸೂಚಕವಾಗಿದೆ ಎಂದು ತಿಳಿಸಿದರು. ಇದೇ ವೇಳೆ ೨೦೦ ಪಾರಂಪರಿಕ ಕೈಗಾರಿಕಾ ಸಮೂಹಗಳನ್ನು ಪುನರುಜ್ಜೀವನಗೊಳಿಸುವ ಯೋಜನೆಗಳನ್ನು ಸಚಿವರು ಘೋಷಿಸಿದರು. ಮತ್ತೊಂದೆಡೆ, ಲೋಕಸಭೆಯಲ್ಲಿ, ಆಡಳಿತಾರೂಢ ಮತ್ತು ವಿರೋಧ ಪಕ್ಷದ ಸದಸ್ಯರ ನಡುವೆ ಗದ್ದಲದ ದೃಶ್ಯಗಳು ಕಂಡುಬಂದವು, ನಂತರ ಸದನವನ್ನು ದಿನದ ಮಟ್ಟಿಗೆ ಮುಂದೂಡಲಾಯಿತು. ಗದ್ದಲದ ನಡುವೆ, ೨೦೨೬ ರ ಕೈಗಾರಿಕಾ ಸಂಬಂಧಗಳ ಸಂಹಿತೆ (ತಿದ್ದುಪಡಿ) ಮಸೂದೆಯನ್ನು ಅಂಗೀಕರಿಸಿದ ನಂತರ, ತುರ್ತು ಸಾರ್ವಜನಿಕ ಪ್ರಾಮುಖ್ಯತೆಯ ವಿಷಯಗಳನ್ನು ಸದನವು ಕೈಗೆತ್ತಿಕೊಂಡಿತು. ಲೋಕಸಭೆಯಲ್ಲಿ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ವಿರುದ್ಧ ನಿರ್ಣಯದ ವಿಷಯವನ್ನು ಬಿಜೆಪಿ ಸಂಸದ ನಿಶಿಕಾಂತ್ ದುಬೆ ಎತ್ತಿದರು. ರಾಹುಲ್ ಗಾಂಧಿ ಅವರು, ಸೊರೊಸ್ ಫೌಂಡೇಶನ್ ಮತ್ತು ಫೋರ್ಡ್ ಫೌಂಡೇಶನ್‌ನೊಂದಿಗೆ ಸಂಪರ್ಕ ಹೊಂದಿದ್ದಾರೆ ಎಂದು ಸಂಸದ ನಿಶಿಕಾಂತ್ ದುಬೆ ಆರೋಪಿಸಿದರು. ಚುನಾವಣಾ ಆಯೋಗ, ಸುಪ್ರೀಂ ಕೋರ್ಟ್ ಮತ್ತು ಲೋಕಸಭೆಯ ಸ್ಪೀಕರ್ ಸೇರಿದಂತೆ ಸಾಂವಿಧಾನಿಕ ಸಂಸ್ಥೆಗಳ ವಿರುದ್ಧ ರಾಹುಲ್ ಗಾಂಧಿ ಪದೇ ಪದೇ ಆರೋಪಗಳನ್ನು ಮಾಡುತ್ತಾರೆ ಎಂದರು. ರಾಹುಲ್ ಗಾಂಧಿಯವರ ಸದಸ್ಯತ್ವವನ್ನು ರದ್ದುಗೊಳಿಸಬೇಕು ಮತ್ತು ಭವಿಷ್ಯದಲ್ಲಿ ಅವರು ಚುನಾವಣೆಗಳಲ್ಲಿ ಸ್ಪರ್ಧಿಸುವುದನ್ನು ನಿಷೇಧಿಸಬೇಕು ಎಂದು ಅವರು ಆಗ್ರಹಿಸಿದರು. ಈ ಹೇಳಿಕೆಗಳು ವಿರೋಧ ಪಕ್ಷದ ಸದಸ್ಯರ ತೀವ್ರ ಟೀಕೆಗೆ ಕಾರಣವಾಯಿತು.

*******

ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದು, ರಾಹುಲ್ ಗಾಂಧಿ ಅವರಿಗೆ ದೇಶದ ರೈತರ ಬಗ್ಗೆ ಯಾವುದೇ ಕಾಳಜಿ ಇಲ್ಲ ಎಂದು ಹೇಳಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ರಾಹುಲ್ ಗಾಂಧಿ ರೈತರ ಸಬಲೀಕರಣದ ಬಗ್ಗೆ ಎಂದಿಗೂ ತೃಪ್ತಿ ಹೊಂದಿಲ್ಲ ಮತ್ತು ಅವರು ಪದೇ ಪದೇ ರಾಷ್ಟ್ರವಿರೋಧಿ ಹೇಳಿಕೆಗಳನ್ನು ನೀಡುತ್ತಿರುವುದು ಕಂಡುಬಂದಿದೆ ಎಂದು ಸಚಿವರು ತಿಳಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು ರೈತರ ಕಲ್ಯಾಣಕ್ಕೆ ನಿರಂತರವಾಗಿ ಆದ್ಯತೆ

ನೀಡುತ್ತಿದ್ದಾರೆ, ಸರ್ಕಾರದ ಪ್ರತಿಯೊಂದು ಪ್ರಮುಖ ನಿರ್ಧಾರವನ್ನು ರೈತರ ಹಿತಾಸಕ್ತಿಗಳನ್ನು ಗಮನದಲ್ಲಿಟ್ಟುಕೊಂಡು ತೆಗೆದುಕೊಳ್ಳಲಾಗಿದೆ ಎಂದು ಹೇಳಿದ್ದಾರೆ.

*******

ಇಂದು ವಿಶ್ವ ರೇಡಿಯೋ ದಿನವನ್ನು ಆಚರಿಸಲಾಗುತ್ತಿದೆ. ೧೯೪೬ರಲ್ಲಿ ವಿಶ್ವಸಂಸ್ಥೆಯ ರೇಡಿಯೋ ಸ್ಥಾಪನೆಯ ಸ್ಮರಣಾರ್ಥ ಪ್ರತಿ ವರ್ಷ ಫೆಬ್ರವರಿ ೧೩ ರಂದು ಈ ದಿನವನ್ನು ಆಚರಿಸಲಾಗುತ್ತದೆ. ಈ ವರ್ಷದ ಧ್ಯೇಯವಾಕ್ಯ "ರೇಡಿಯೋ ಮತ್ತು ಕೃತಕ ಬುದ್ಧಿಮತ್ತೆ; ಎಐ ಒಂದು ಸಾಧನ, ಧ್ವನಿಯಲ್ಲ". ೨೦೨೬ರ ವಿಶ್ವ ರೇಡಿಯೋ ದಿನವನ್ನು ಗುರುತಿಸಲು, ಛತ್ತೀಸ್‌ಗಢದ ಆಕಾಶವಾಣಿ ರಾಯ್‌ಪುರ, ಯುನೆಸ್ಕೋ ಸಹಯೋಗದೊಂದಿಗೆ, ಇಂದು ವಿಶ್ವ ರೇಡಿಯೋ ದಿನದ ಸಮಾವೇಶವನ್ನು ಆಯೋಜಿಸುತ್ತಿದೆ. ಈ ಸಮಾವೇಶವು ಧ್ಯೇಯವಾಕ್ಯವನ್ನು ಕೇಂದ್ರೀಕರಿಸಿದ್ದು, ಸಮಾವೇಶದ ವೇಳೆ ರೇಡಿಯೋ ಪ್ರಸಾರದಲ್ಲಿ ವಿಷಯ ರಚನೆ, ಪ್ರೇಕ್ಷಕರ ತೊಡಗಿಸಿಕೊಳ್ಳುವಿಕೆ ಮತ್ತು ಪ್ರವೇಶಸಾಧ್ಯತೆಯನ್ನು ಕೃತಕ ಬುದ್ಧಿಮತ್ತೆ ಹೇಗೆ ಬಲಪಡಿಸುತ್ತದೆ ಎಂಬುದರ ಕುರಿತು ಚರ್ಚೆ ನಡೆಯಲಿದೆ. ಆಕಾಶವಾಣಿಯು ಆರಂಭದಿಂದಲೂ "ಬಹುಜನ ಹಿತಾಯ, ಬಹುಜನ ಸುಖಾಯ" ಎಂಬ ಧ್ಯೇಯವಾಕ್ಯದೊಂದಿಗೆ ರಾಷ್ಟ್ರಕ್ಕೆ ಸೇವೆ ಸಲ್ಲಿಸುತ್ತಿದೆ. ೧೯೩೬ ರಲ್ಲಿ ಸ್ಥಾಪನೆಯಾಗಿ ಸ್ವಾತಂತ್ರ್ಯದ ನಂತರ ಸಾರ್ವಜನಿಕ ಮಾಲೀಕತ್ವಕ್ಕೆ ಒಳಪಟ್ಟ ಆಕಾಶವಾಣಿ, ಪ್ರಸಾರವಾಗುವ ಭಾಷೆಗಳ ಸಂಖ್ಯೆ ಮತ್ತು ಪ್ರೇಕ್ಷಕರ ವೈವಿಧ್ಯತೆಯ ದೃಷ್ಟಿಯಿಂದ ವಿಶ್ವದ ಅತಿದೊಡ್ಡ ಪ್ರಸಾರ ಸಂಸ್ಥೆಗಳಲ್ಲಿ ಒಂದಾಗಿ ಬೆಳೆದಿದೆ. ಖಾಸಗಿ ಎಫ್‌ಎಂ ರೇಡಿಯೋ ಭಾರತದಾದ್ಯಂತ ನಗರ ಮತ್ತು ಪ್ರಾದೇಶಿಕ ಮನರಂಜನೆ ಮತ್ತು ಮಾಹಿತಿಯನ್ನು ತಲುಪಿಸುವ ಮೂಲಕ ಸಾರ್ವಜನಿಕ ಪ್ರಸಾರಕ್ಕೆ ಪೂರಕವಾಗಿದೆ.ವಿಶ್ವ ರೇಡಿಯೋ ದಿನದ ಸಂದರ್ಭದಲ್ಲಿ ತಮ್ಮ ಸಂದೇಶದಲ್ಲಿ, ಮಾಹಿತಿ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ. ಎಲ್. ಮುರುಗನ್, ಸಾಮಾನ್ಯ ಜನರಿಗೆ ಮಾಹಿತಿಯನ್ನು ಪ್ರಸಾರ ಮಾಡುವಲ್ಲಿ ರೇಡಿಯೋ ನಿರ್ಣಾಯಕ ಪಾತ್ರ ವಹಿಸುತ್ತದೆ ಎಂದು ಹೇಳಿದರು.

****ಧ್ವನಿ**** ಮುರುಗನ್

*******

೫ ರಾಜ್ಯಗಳಲ್ಲಿ ಗ್ರಾಮೀಣ ಸ್ಥಳೀಯ ಸಂಸ್ಥೆಗಳನ್ನು ಬಲಪಡಿಸಲು ಸರ್ಕಾರವು ೨೦೨೫-೨೬ನೇ ಸಾಲಿಗೆ ಹದಿನೈದನೇ ಹಣಕಾಸು ಆಯೋಗದ ೨ನೇ ಕಂತಿನ ಮೂರು ಸಾವಿರದ ೩೨೪ ಕೋಟಿ ರೂಪಾಯಿಗಳಿಗೂ ಹೆಚ್ಚಿನ ಅನುದಾನವನ್ನು ಮಂಜೂರು ಮಾಡಿದೆ. ಬಿಹಾರ, ಹರಿಯಾಣ, ಹಿಮಾಚಲ ಪ್ರದೇಶ, ಉತ್ತರ ಪ್ರದೇಶ ಮತ್ತು ಪಶ್ಚಿಮಬಂಗಾಳ ರಾಜ್ಯಗಳಿಗೆ ಅನುದಾನ ಮಂಜೂರಾಗಿದೆ. ೨೦೨೫-೨೬ನೇ ಸಾಲಿಗೆ ೧೫ನೇ ಹಣಕಾಸು ಆಯೋಗದ ೨ನೇ ಕಂತಿನ ಅನುದಾನವನ್ನು ಸ್ಥಳ-ನಿರ್ದಿಷ್ಟ ಅಗತ್ಯಗಳಿಗಾಗಿ ಬಳಸಿಕೊಳ್ಳಲಾಗುವುದು ಎಂದು ಪಂಚಾಯತ್ ರಾಜ್ ಸಚಿವಾಲಯ ತಿಳಿಸಿದೆ.

*******

ಭಾರತೀಯ ರಿಸರ್ವ್ ಬ್ಯಾಂಕ್ ಕಿಸಾನ್ ಕ್ರೆಡಿಟ್ ಕಾರ್ಡ್ ಯೋಜನೆಗಾಗಿ ಪರಿಷ್ಕೃತ ಕರಡು ಮಾನದಂಡಗಳನ್ನು ಬಿಡುಗಡೆ ಮಾಡಿದೆ.ಇದು ಮಣ್ಣಿನ ಪರೀಕ್ಷೆ, ಹವಾಮಾನ ಮುನ್ಸೂಚನೆ ಮತ್ತು ಸಾವಯವ ಪ್ರಮಾಣೀಕರಣದಂತಹ ಕೃಷಿ-ತಂತ್ರಜ್ಞಾನ ಉಪಕ್ರಮಗಳ ವೆಚ್ಚಗಳನ್ನು ಅರ್ಹ ಕೃಷಿ ಸಾಲದ ಘಟಕಗಳಲ್ಲಿ ಸೇರಿಸಲು ಪ್ರಸ್ತಾಪಿಸಿದೆ. ಕರಡು ಮಾನದಂಡಗಳ ಕುರಿತು ಮಾರ್ಚ್ ೬ರ ವರೆಗೆ ಪ್ರತಿಕ್ರಿಯೆಗಳನ್ನು ಕಳುಹಿಸಬಹುದಾಗಿದೆ.

*******

ನವದೆಹಲಿಯಲ್ಲಿ ನಿನ್ನೆ ರಾತ್ರಿ ನಡೆದ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್ ಪಂದ್ಯದಲ್ಲಿ ಭಾರತ ನಮೀಬಿಯಾವನ್ನು ೯೩ ರನ್‌ಗಳಿಂದ ಮಣಿಸಿದೆ. ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಭಾರತ, ನಿಗದಿತ ೨೦ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೨೦೯ ರನ್ ಗಳಿಸಿತು. ಭಾರತದ ಪರ ಇಶಾನ್ ಕಿಶನ್ ೨೪ ಎಸೆತಗಳಲ್ಲಿ ೬೧ ರನ್‌ಗಳಿಸಿದರು. ೨೧೦ ರನ್‌ಗಳ ಗುರಿ ಬೆನ್ನತ್ತಿದ ನಮೀಬಿಯಾ, ೧೮.೨ ಓವರ್‌ಗಳಲ್ಲಿ ತನ್ನೆಲ್ಲಾ ವಿಕೆಟ್ ಕಳೆದುಕೊಂಡು ೧೧೬ ರನ್ ಗಳಿಸಲಷ್ಟೇ ಶಕ್ತವಾಯಿತು.

*******

ಯುವಕರು ಹಾಗೂ ಕ್ರಿಕೆಟ್ ಕ್ರೀಡೆಯ ಹಿತದೃಷ್ಟಿಯಿಂದ ಇನ್ನುಮುಂದೆ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಪಂದ್ಯ ಆಯೋಜನೆಗೆ ಸರ್ಕಾರ ಅನುಮತಿ ನೀಡುತ್ತಿದೆ" ಎಂದು ಕರ್ನಾಟಕ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

*******